ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ರಾಜ್ಯದಲ್ಲಿ ಕೋವಿಡ್-19 ಸೋಂಕಿನ ಎರಡನೇ ಅಲೆ ಕುರಿತು

ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :-

583(747) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕೋವಿಡ್-19 ಸೋಂಕಿನ ಎರಡನೇ ಅಲೆಯನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ಸರ್ಕಾರದ ಕ್ರಮವೇನು; (ವಿವರ ನೀಡುವುದು)

(ಆ) ಪ್ರಸ್ತುತ ವಿದೇಶಗಳಲ್ಲಿ ಕೋವಿಡ್-19 ಸೋಂಕಿನ ಎರಡನೇ ಅಲೆಯ ಅಬ್ಬರವೂ ಹೆಚ್ಚಾಗಿರುವುದರಿಂದ ಸರ್ಕಾರವು ಆ ದೇಶಗಳಿಂದ ವಾಪಸ್ಸಾಗುವ ಪ್ರಯಾಣಿಕರಿಗೆ ಸೂಕ್ತ ರೀತಿಯ ನಿರ್ಬಂಧ ವಿಧಿಸುವ ಯಾವುದಾದರೂ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ವಿವರ ನೀಡುವುದು)

(ಇ) ಪ್ರಸ್ತುತ ಕೋವಿಡ್-19 ಸೋಂಕಿನ ವಿರುದ್ಧ ಹೋರಾಟ ನಡೆಸಲು ಹಲವು ಲಸಿಕೆಗಳು ಅಭಿವೃದ್ಧಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ರಾಜ್ಯದಲ್ಲಿ ಕೋವಿಡ್-19 ಸೋಂಕನ್ನು ತಡೆಗಟ್ಟಲು ಸರ್ಕಾರ ಯಾವ ಲಸಿಕೆಯನ್ನು ವಿತರಿಸಲು ಉದ್ದೇಶಿಸಿದೆ;(ವಿವರ ನೀಡುವುದು)

(ಈ) ಕೋವಿಡ್-19 ಸೋಂಕನ್ನು ನಿವಾರಿಸಲು ಸಾರ್ವಜನಿಕವಾಗಿ ವಿತರಿಸಲು ಉದ್ದೇಶಿಸಿರುವ ಲಸಿಕೆಯ ಚುಚ್ಚುಮದ್ದು ಪಡೆಯುವುದರಿಂದ ಸಾರ್ವಜನಿಕರ ಆರೋಗ್ಯಕ್ಕೆ ಯಾವುದಾದರೂ ಅಡ್ಡ ಪರಿಣಾಮಗಳು ತಲೆದೋರುವ ಸಂಭವದ ಬಗ್ಗೆ ಸರ್ಕಾರ ಯಾವುದಾದರು ವೈಜ್ಞಾನಿಕ ಸಂಶೋಧನೆ ಕೈಗೊಂಡಿದೆಯೇ ಅಥವಾ ಸರ್ಕಾರದ ನಿಲುವೇನು? (ವಿವರ ನೀಡುವುದು)